**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 591(706) |
| 2 | ಮಾನ್ಯ ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | : | 21.08.2026. |
| 4 | ಉತ್ತರಿಸುವ ಸಚಿವರು | : | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ನಗರದ ಬ್ರೀಮ್ಸ್ ಆಸ್ಪತ್ರೆಯಲ್ಲಿ 18 ಕೋಟಿ ರೂ. ವೆಚ್ಚ ಮಾಡಿ ಕ್ಯಾಥಲ್ಯಾಬ್ ಉದ್ಘಾಟನ ಮಾಡಿದ್ದು ಇಲ್ಲಿವರೆಗೂ ಆರಂಭವಾಗದಿರಲು ಕಾರಣವೇನು; (ಮಾಹಿತಿ ನೀಡುವುದು) | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 75-ಹಾಸಿಗೆಗಳ ಹೃದ್ರೋಗ ಘಟಕವನ್ನು ಕಾರ್ಯಾರಂಭಗೊಳಿಸಲು ಅವಶ್ಯಕವಿರುವ ವೈದ್ಯರು ಮತ್ತು ತಾಂತ್ರಿಕ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಸಂಸ್ಥೆಯಿಂದ ಎರಡು ಬಾರಿ ಅಧಿಸೂಚನೆ ಹೊರಡಿಸಲಾಗಿದ್ದರೂ ಸಹ, ವೈದ್ಯರ ಹುದ್ದೆ ಮತ್ತು ತಾಂತ್ರಿಕ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಹಾಜರಾಗಿರುವುದಿಲ್ಲ.<br><br>ಮುಂದುವರೆದು, ಬೀದರ್ ನಗರದ ಬ್ರೀಮ್ಸ್ ಆಸ್ಪತ್ರೆಯಲ್ಲಿ ಕ್ಯಾಥಲ್ಯಾಬ್‌ನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ (PPP Model) ಕಾರ್ಯಾರಂಭಗೊಳಿಸುವ ಸಂಬಂಧ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳ ಮತ್ತು ಒಳನಾಡು ಜಲಸಾರಿಗೆ ಇಲಾಖೆ (ಪಿಪಿಪಿ ಕೋಶ) ಇವರ ಸಹಮತಿಯೊಂದಿಗೆ ಕಾರ್ಯಗತಗೊಳಿಸಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ.<br><br>ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್‌ನಲ್ಲಿ ಹೃದ್ರೋಗ ಘಟಕವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಕಾರ್ಯಗತಗೊಳಿಸಲು ದಿನಾಂಕ:19.08.2026 ರಂದು ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿರುತ್ತದೆ. |
| (ಆ) | ನೂರಾರು ಕೋಟಿ ಅನುದಾನ ಬರುವ ಬ್ರೀಮ್ಸ್ ಆಸ್ಪತ್ರೆಗೆ ಪದೇ ಪದೇ ಆರ್ಥಿಕ ಅಧಿಕಾರಿಯನ್ನು ನೇಮಿಸಲಾಗುತ್ತಿರುವುದಕ್ಕೆ ಕಾರಣವೇನು; | ಸರ್ಕಾರದ ಅಧಿಸೂಚನೆ ಸಂಖ್ಯೆ:ಆಇ/293/ರಾಲೆಪ/2025, ದಿನಾಂಕ:07.08.2025 ರಂತೆ ಶ್ರೀ ಶ್ರೀಕಾಂತ, ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್ ಇವರನ್ನು ಬ್ರೀಮ್ಸ್, ಬೀದರ್‌ನ ಆರ್ಥಿಕ ಸಲಹೆಗಾರರ ಹುದ್ದೆಗೆ ನೇಮಿಸಿ ಆದೇಶಿಸಲಾಗಿರುತ್ತದೆ. ಸದರಿಯವರು ದಿನಾಂಕ:21.08.2025 ರಂದು ಸಂಸ್ಥೆಯ |

| | | |
|---|---|---|
| | | ಕರ್ತವ್ಯಕ್ಕೆ ವರದಿ ಮಾಡಿಕೊಂಡು ದಿನಾಂಕ: 06.03.2026 ರಂದು ಸ್ವಯಂಪ್ರೇರಿತರಾಗಿ ಕರ್ತವ್ಯದಿಂದ ಬಿಡುಗಡೆಗೊಂಡಿರುತ್ತಾರೆ. ತದನಂತರ, ಜಿಲ್ಲಾಧಿಕಾರಿ ಕಚೇರಿ, ಬೀದರ್ ಜಿಲ್ಲೆ ಇವರ ಆದೇಶ ಸಂಖ್ಯೆ:ಕಂ/ಸಿಬ್ಬಂದಿ/ಸಿಆರ್-/2025-26 ದಿನಾಂಕ 13.03.2026 ರ ಪ್ರಕಾರ ಶ್ರೀ ಪ್ರಕಾಶ್, ಸಹಾಯಕ ನಿರ್ದೇಶಕರು ಇವರಿಗೆ ಬ್ರಿಮ್ಸ್ ಬೀದರಿನ ಆರ್ಥಿಕ ಸಲಹೆಗಾರರ ಹುದ್ದೆಯ ಅಧಿಕ ಪ್ರಭಾರದಲ್ಲಿರಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಸದರಿಯವರು ದಿನಾಂಕ:16.03.2026 ರಂದು ಈ ಸಂಸ್ಥೆಯ ಆರ್ಥಿಕ ಸಲಹೆಗಾರರ ಅಧಿಕ ಪ್ರಭಾರದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿದ್ದಾರೆ. |
| (ಇ) | ಹಿಂದಿನ ಅವಧಿಯಲ್ಲಿ ನಡೆದ ಕೋಟ್ಯಾಂತರ ರೂಪಾಯಿ ಅವ್ಯವಹಾರ ಪ್ರಕರಣ ಯಾವ ಹಂತದಲ್ಲಿದೆ; ಅವ್ಯವಹಾರ ಮಾಡಿದವರ ಮೇಲೆ ಕೈಗೊಂಡ ಕ್ರಮವೇನು; | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಸಂಸ್ಥೆಯಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ಪ್ರಕರಣದ ಆರೋಪದ ಕುರಿತಂತೆ ಸರ್ಕಾರದಿಂದ ಅಭಿಯೋಜನಾ ಮಂಜೂರಾತಿ ನೀಡಿ ಆದೇಶಿಸಿ, ಹಿಂದಿನ ಭ್ರಷ್ಟಾಚಾರ ನಿಗ್ರಹ ದಳಕ್ಕೆ ವಹಿಸಲಾಗಿರುತ್ತದೆ. ಸದರಿ ಆದೇಶವನ್ನು ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದು, ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರದಿಂದ ಕ್ರಮ ವಹಿಸಲಾಗಿದೆ.<br><br>ಸದರಿ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ಕೂಡ ಆದೇಶಿಸಲಾಗಿರುತ್ತದೆ. ಸದರಿ ಆದೇಶವನ್ನು ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದು, ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರದಿಂದ ಕ್ರಮ ವಹಿಸಲಾಗಿದೆ. |
| (ಈ) | ಬ್ರೀಮ್ಸ್ ಆಸ್ಪತ್ರೆಯಲ್ಲಿ ಅಕ್ರಮ ನೇಮಕಾತಿಗಳಿಗೆ ಕಡಿವಾಣ ಹಾಕಲು ಸರ್ಕಾರದ ಕೈಗೊಂಡ ಕ್ರಮವೇನು? (ಮಾಹಿತಿ ನೀಡುವುದು) | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಸಂಸ್ಥೆಗೆ ಸಂಬಂಧಪಟ್ಟಂತೆ ಎಲ್ಲಾ ಅನಧಿಕೃತ ನೇಮಕಾತಿಗಳನ್ನು ರದ್ದುಪಡಿಸಿ, ಕರ್ತವ್ಯದಿಂದ ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಸಂಸ್ಥೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆಗಳಿಗೆ ಅನುಗುಣವಾಗಿ ನೇಮಕಾತಿ ಮಾಡಿಕೊಳ್ಳಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. |

**ಸಂಖ್ಯೆ:**ಎಂಇಡಿ 440 ಎಂಎಸ್ಎಫ್ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು